# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 469 (541)
ಮಾನ್ಯ ಸದಸ್ಯರ ಹೆಸರು : ಶ್ರೀ ಬಸನಗೌಡ ಬಾದರ್ಲಿ
ಉತ್ತರಿಸುವ ದಿನಾಂಕ : 30-01-2026
ಉತ್ತರಿಸುವ ಸಚಿವರು : ಸಮಾಜ ಕಲ್ಯಾಣ ಸಚಿವರು

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಸಿಂಧನೂರು ತಾಲ್ಲೂಕಿನಲ್ಲಿ ಪ್ರಸ್ತುತ ಸಮಾಜ ಕಲ್ಯಾಣ ಇಲಾಖೆಯ 05 ಮೆಟ್ರಿಕ್ ನಂತರದ ಬಾಲಕರ/ ಬಾಲಕಿಯರ ವಿದ್ಯಾರ್ಥಿ ನಿಲಯಗಳು ಕಾರ್ಯನಿರ್ವಹಿಸುತ್ತಿದ್ದು, 2025-26 ನೇ ಸಾಲಿನಲ್ಲಿ 1573 ವಿದ್ಯಾರ್ಥಿಗಳಿಗೆ ಪ್ರವೇಶಾತಿ ಕಲ್ಪಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;</td><td>ಹೌದು,<br><br>ಸಿಂಧನೂರು ತಾಲ್ಲೂಕಿನಲ್ಲಿ 03 ಡಾ|| ಬಿ.ಆರ್. ಅಂಬೇಡ್ಕರ್ ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿ ನಿಲಯಗಳು ಹಾಗೂ 02 ಡಾ|| ಬಿ.ಆರ್.ಅಂಬೇಡ್ಕರ್ ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿನಿಲಯಗಳು ಸೇರಿದಂತೆ ಒಟ್ಟು 05 ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳು ಕಾರ್ಯನಿರ್ವಹಿಸುತ್ತಿವೆ.<br><br>ಅದರಂತೆ ಸದರಿ ವಿದ್ಯಾರ್ಥಿ ನಿಲಯಗಳಲ್ಲಿ, HMIS ಪ್ರಕಾರ 819 ಬಾಲಕಿಯರು ಹಾಗೂ 781 ಬಾಲಕರು ಒಟ್ಟು 1600 ವಿದ್ಯಾರ್ಥಿಗಳು ದಾಖಲಾಗಿರುತ್ತಾರೆ.</td></tr>
<tr><td>ಆ)</td><td>ಹೆಚ್ಚಿನ ವಿದ್ಯಾರ್ಥಿಗಳು ದಾಖಲಾಗಿರುವ ಹಿನ್ನೆಲೆಯಲ್ಲಿ ಪ್ರಸ್ತುತ ತಾಲ್ಲೂಕಿನಲ್ಲಿ ಕಾರ್ಯನಿರ್ವಹಿಸುತ್ತಿರುವ ಇಲಾಖೆಯ 05 ಮೆಟ್ರಿಕ್ ನಂತರದ ಬಾಲಕರ/ ಬಾಲಕಿಯರ ವಿದ್ಯಾರ್ಥಿನಿಲಯಗಳ ಮೇಲೆ ಹೆಚ್ಚಿನ ಒತ್ತಡವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;</td><td>ಹೌದು,<br><br>ರಾಯಚೂರು ಜಿಲ್ಲೆಯ ಸಿಂಧನೂರು ತಾಲ್ಲೂಕಿನಲ್ಲಿ ಮೆಟ್ರಿಕ್‌ನಂತರದ ವಿದ್ಯಾರ್ಥಿನಿಲಯಗಳಲ್ಲಿ ದಾಖಲಾದ ವಿವರ ಈ ಕೆಳಕಂಡಂತಿದೆ.<br><br>
<table>
<tr><th>Sl.no</th><th>Hostel Name</th><th>Sanctioned Strength</th><th>Total Admitted</th></tr>
<tr><td>1</td><td>Dr.B.R.Ambedkar Govt Post matric Degree BOYS Hostel, SINDHNUR</td><td>100</td><td>212</td></tr>
<tr><td>2</td><td>Dr.B.R.Ambedkar Govt Post matric Degree BOYS Hostel, SINDHNUR</td><td>200</td><td>274</td></tr>
<tr><td>3</td><td>Dr.B.R.Ambedkar Govt Post matric Degree Girls Hostel, SINDHNUR</td><td>100</td><td>461</td></tr>
<tr><td>4</td><td>Dr.B.R.Ambedkar Govt Post matric Professional Girls Hostel, SINDHNUR</td><td>100</td><td>358</td></tr>
<tr><td>5</td><td>Dr.B.R.Ambedkar Govt Post matric PUC BOYS Hostel, SINDHNUR</td><td>100</td><td>295</td></tr>
<tr><td></td><td>Total:</td><td>600</td><td>1600</td></tr>
</table>
</td></tr>
</table>

---2

| | | |
|---|---|---|
| | | ಸರ್ಕಾರದ ಸುತ್ತೋಲೆ ಸಂಖ್ಯೆ:ಸಕಇ 87 ಸಮನ್ವಯ 2013, ದಿನಾಂಕ:20-07-2013 ರನ್ವಯ ಇಲಾಖೆಯ ವಿದ್ಯಾರ್ಥಿನಿಲಯಗಳಿಗೆ ಪ್ರವೇಶ ಕೋರಿ ಅರ್ಜಿ ಸಲ್ಲಿಸುವ ಎಲ್ಲಾ ಅರ್ಹ ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳಿಗೆ ನಿಲಯದಲ್ಲಿ ಪ್ರವೇಶ ಕಲ್ಪಿಸಲಾಗುತ್ತಿದೆ.<br><br>ಪ್ರಸ್ತುತ ಇಲಾಖೆಯ ವಿದ್ಯಾರ್ಥಿ ನಿಲಯಗಳಲ್ಲಿ ಮಂಜೂರಾತಿ ಸಂಖ್ಯೆಗಿಂತ ಹೆಚ್ಚಿನ ಸಂಖ್ಯೆಯಲ್ಲಿ ಅರ್ಜಿಗಳು ಸ್ವೀಕೃತವಾಗುವ ವಿದ್ಯಾರ್ಥಿ ನಿಲಯಗಳ ಕಟ್ಟಡದ ಸಾಮರ್ಥ್ಯಾನುಸಾರ (Permissible Strength) ಪ್ರವೇಶಾವಕಾಶ ಕಲ್ಪಿಸಲು ಅವಕಾಶ ಕಲ್ಪಿಸಲಾಗಿರುತ್ತದೆ. ಹೆಚ್ಚುವರಿ ವಿದ್ಯಾರ್ಥಿಗಳನ್ನು ಬಾಡಿಗೆ ಕಟ್ಟಡ ಪಡೆದು ಪ್ರವೇಶಾತಿ ಕಲ್ಪಿಸಲು ಕ್ರಮವಹಿಸಲಾಗುತ್ತಿದೆ. |
| ಇ) | ಸದರಿ ವಸತಿ ನಿಲಯಗಳಿಗೆ ದಾಖಲಾಗಿರುವ ವಿದ್ಯಾರ್ಥಿಗಳ ಸಂಖ್ಯೆ ಪ್ರಸ್ತುತ ಮಂಜೂರಾಗಿರುವ ಸಂಖ್ಯೆಗಿಂತ ಹೆಚ್ಚಾಗಿದ್ದು, ಸಮರ್ಪಕವಾಗಿ ಸೌಲಭ್ಯಗಳನ್ನು ವಿದ್ಯಾರ್ಥಿಗಳಿಗೆ ಒದಗಿಸಲು ಕಷ್ಟಸಾಧ್ಯವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಅನುದಾನದ ಲಭ್ಯತೆಯ ಮೇಲೆ ಅಗತ್ಯ ಮೂಲಭೂತ ಸೌಕರ್ಯಗಳನ್ನು ಹಂತಹಂತವಾಗಿ ಒದಗಿಸಲು ಕ್ರಮವಹಿಸಲಾಗುತ್ತಿದೆ. |
| ಈ) | ಬಂದಿದ್ದಲ್ಲಿ, ಸರ್ಕಾರವು ಸಿಂಧನೂರು ತಾಲ್ಲೂಕಿನ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡ ವಿದ್ಯಾರ್ಥಿಗಳಿಗೆ ಸೂಕ್ತ ವಸತಿ ಸೌಲಭ್ಯವನ್ನು ಕಲ್ಪಿಸಲು ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ವಿದ್ಯಾರ್ಥಿ ನಿಲಯಗಳೊಂದಿಗೆ ಇನ್ನೂ ಕನಿಷ್ಟ 05 ವಿದ್ಯಾರ್ಥಿ ನಿಲಯಗಳನ್ನು ಸರ್ಕಾರದಿಂದ ಹೊಸದಾಗಿ ಮಂಜೂರು ಮಾಡಬೇಕಿದ್ದು, ಈ ಕುರಿತು ಸರ್ಕಾರದ ನಿಲುವೇನು; | ಸಿಂಧನೂರು ತಾಲ್ಲೂಕಿನಿಂದ ಇದುವರೆಗೆ ಯಾವುದೇ ಪ್ರಸ್ತಾವನೆ ಬಂದಿರುವುದಿಲ್ಲ.<br><br>ಹೊಸ ವಿದ್ಯಾರ್ಥಿ ನಿಲಯಗಳ ಮಂಜೂರಾತಿಗಾಗಿ ನಿಗದಿತ ನಮೂನೆಯಲ್ಲಿ ಜಿಲ್ಲೆಯ ಸಕ್ಷಮ ಪ್ರಾಧಿಕಾರಿಗಳಾದ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್ ರವರ ಮೂಲಕ ನಿಗದಿತ ನಮೂನೆಯಲ್ಲಿ ಸ್ವೀಕೃತವಾದಲ್ಲಿ ನಿಯಮಾನುಸಾರ ಮಂಜೂರು ಮಾಡಲು ಪರಿಶೀಲಿಸಲಾಗುವುದು. |
| ಉ) | ಯಾವ ಕಾಲಮಿತಿಯೊಳಗೆ ಹೆಚ್ಚುವರಿ ವಿದ್ಯಾರ್ಥಿ ನಿಲಯಗಳನ್ನು ಸರ್ಕಾರದಿಂದ ಮಂಜೂರು ಮಾಡಲಾಗುತ್ತದೆ? | |

**ಸಕಇ 115 ಪಕವಿ 2026**

**(ಡಾ: ಹೆಚ್.ಸಿ.ಮಹದೇವಪ್ಪ)**
**ಸಮಾಜ ಕಲ್ಯಾಣ ಸಚಿವರು**